# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 2126

ಸದಸ್ಯರ ಹೆಸರು : ಶ್ರೀ ಹೆಚ್. ಎಸ್. ಗೋಪಿನಾಥ್

ಉತ್ತರಿಸುವ ಸಚಿವರು : ಮಾನ್ಯ ಸಾರಿಗೆ ಮತ್ತು ಮುಜರಾಯಿ ಸಚಿವರು

ಉತ್ತರಿಸುವ ದಿನಾಂಕ : 25.03.2026

<table>
<tr><th>ಕ್ರ. ಸಂ</th><th>ಪ್ರಶ್ನೆ</th><th>ಉತ್ತರ</th></tr>
<tr><td>ಅ.</td><td>ರಾಜ್ಯದಲ್ಲಿ ಶಕ್ತಿ ಯೋಜನೆ ಪ್ರಾರಂಭವಾದ ದಿನದಿಂದ ಇದುವರೆಗೂ ನಾಲ್ಕು ಸಾರಿಗೆ ಸಂಸ್ಥೆಗಳಿಂದ ಪ್ರಯಾಣ ಮಾಡಿರುವ ಮಹಿಳಾ ಪ್ರಯಾಣಿಕರ ಸಂಖ್ಯೆ ಎಷ್ಟು;</td><td>ರಾಜ್ಯ ಸರ್ಕಾರದ ಮಹತ್ವಾಕಾಂಕ್ಷೆಯ ಯೋಜನೆಯಾದ ಶಕ್ತಿ ಯೋಜನೆಯು ದಿನಾಂಕ:11.06.2023ರಿಂದ ಆರಂಭವಾಗಿದ್ದು, ಜಾರಿಯಾದ ದಿನಾಂಕ:11.06.2023 ರಿಂದ ಫೆಬ್ರುವರಿ-2026 ರವರೆಗೆ ರಸ್ತೆ ಸಾರಿಗೆ ನಿಗಮಗಳ ಕಾಯ್ದೆ-1950 (The Road Transport Corporation Act,1950) ರಡಿ ರಾಜ್ಯದ ನಾಲ್ಕು ಸಾರಿಗೆ ನಿಗಮಗಳಾದ ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ನಿಗಮ, ಬೆಂಗಳೂರು ಮಹಾನಗರ ಸಾರಿಗೆ ಸಂಸ್ಥೆ, ವಾಯುವ್ಯ ಕರ್ನಾಟಕ ರಸ್ತೆ ಸಾರಿಗೆ ಸಂಸ್ಥೆ ಮತ್ತು ಕಲ್ಯಾಣ ಕರ್ನಾಟಕ ರಸ್ತೆ ಸಾರಿಗೆ ನಿಗಮಗಳ ಬಸ್‌ಗಳಲ್ಲಿ 680.87 ಕೋಟಿ ಮಹಿಳಾ ಫಲಾನುಭವಿಗಳು ಪ್ರಯಾಣಿಸಿದ್ದು, ಮಹಿಳಾ ಫಲಾನುಭವಿಗಳ ಸಂಖ್ಯೆಯ ವಿವರಗಳನ್ನು ಅನುಬಂಧದಲ್ಲಿ ಒದಗಿಸಲಾಗಿದೆ.</td></tr>
<tr><td>ಆ.</td><td>ಮಹಿಳೆಯರ ಟಿಕೆಟ್ ಮೊತ್ತವನ್ನು ರಾಜ್ಯ ಸರ್ಕಾರವು ಬಿ.ಎಂ.ಟಿ.ಸಿ ಗೆ ಪೂರ್ಣ ಪ್ರಮಾಣದಲ್ಲಿ ಪಾವತಿಸದೇ ಕೋಟ್ಯಾಂತರ ರೂ. ಬಾಕಿ ಉಳಿಸಿಕೊಂಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;</td><td rowspan="2">ಶಕ್ತಿ ಯೋಜನೆಯಡಿ ಬೆಂಗಳೂರು ಮಹಾನಗರ ಸಾರಿಗೆ ಸಂಸ್ಥೆಯ ಬಸ್ಸುಗಳಲ್ಲಿ ಉಚಿತ ಪ್ರಯಾಣ ಸೌಲಭ್ಯ ಪಡೆದಿರುವ ಮಹಿಳಾ ಫಲಾನುಭವಿಗಳ ಸಂಖ್ಯೆ, ಉಚಿತ ಪ್ರಯಾಣ ಸೌಲಭ್ಯದಿಂದ ಉಂಟಾದ ವೆಚ್ಚ, ಸರ್ಕಾರದಿಂದ ಒದಗಿಸಲಾದ ಸಹಾಯಧನ ಹಾಗೂ ಬಾಕಿ ಇರುವ ಮೊತ್ತದ ವಿವರಗಳು ಕೆಳಕಂಡಂತಿದೆ.<br>(ರೂ. ಕೋಟಿಗಳಲ್ಲಿ)
<table>
<tr><th>ವರ್ಷ</th><th>ಫಲಾನುಭವಿಗಳ ಸಂಖ್ಯೆ (ಕೋಟಿಗಳಲ್ಲಿ)</th><th>ವೆಚ್ಚ</th><th>ಸಹಾಯಧನ ಬಿಡುಗಡೆ</th><th>ಬಾಕಿ ಮೊತ್ತ</th></tr>
<tr><td>2023-24</td><td>57.84</td><td>755.10</td><td>549.67</td><td>-205.44</td></tr>
<tr><td>2024-25</td><td>77.27</td><td>1059.37</td><td>864.59</td><td>-194.78</td></tr>
<tr><td>2025-26 (up to Feb-2026)</td><td>82.51</td><td>1282.80</td><td>833.00</td><td>-449.79</td></tr>
<tr><td>Total</td><td>217.62</td><td>3097.27</td><td>2247.35</td><td>-850.01</td></tr>
</table></td></tr>
<tr><td>ಇ.</td><td>ಬಂದಿದ್ದಲ್ಲಿ, ಎಷ್ಟು ಬಾಕಿ ಉಳಿಸಿಕೊಂಡಿದೆ ಹಾಗೂ ಬಾಕಿ ಉಳಿಸಿಕೊಳ್ಳಲು ಇರುವ ಕಾರಣಗಳೇನು;</td></tr>
<tr><td>ಈ.</td><td>ಸರ್ಕಾರವು ಈವರೆಗೆ ಬಾಕಿ ಮರುಪಾವತಿಸದಿರುವುದರಿಂದ</td><td></td></tr>
</table>

| ಕ್ರ.ಸಂ | ಪ್ರಶ್ನೆ | ಉತ್ತರ |
|---|---|---|
| | ಸಂಸ್ಥೆಯು ಆರ್ಥಿಕ ಸಂಕಷ್ಟಕ್ಕೆ ಸಿಲುಕಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಸಂಸ್ಥೆಗೆ ಶಕ್ತಿ ಯೋಜನೆಯಡಿ ಅನುದಾನವನ್ನು ಪ್ರತಿ ಮಾಹೆಯಾನ ಮುಂಗಡವಾಗಿ ಬಿಡುಗಡೆ ಮಾಡುತ್ತಿದ್ದು, ಮಾರ್ಚ್-2026ರ ಮಾಹೆಯವರೆಗೆ ಈಗಾಗಲೇ ಬಿಡುಗಡೆಯಾಗಿರುತ್ತದೆ. |
| ಉ. | ಬಂದಿದ್ದಲ್ಲಿ, ಈ ಬಗ್ಗೆ ಸರ್ಕಾರ ಕೈಗೊಂಡ ಕ್ರಮಗಳೇನು? | **ಬೆಂ.ಮ.ಸಾ.ಸಂಸ್ಥೆಯಲ್ಲಿ 2023ನೇ ಮೇ ವರೆಗೆ ಒಟ್ಟು ರೂ.** 1383.86 **ಕೋಟಿಗಳ ಹೊಣೆಗಾರಿಕೆ ಬಾಕಿ ಇದ್ದುದ್ದರಿಂದ (ಸಾಲದ ಬಾಕಿ ಹೊಣೆಗಾರಿಕೆ ಒಳಗೊಂಡಂತೆ), ಸದರಿ ಬಾಕಿಯು ಸಂಸ್ಥೆಯ ತೀವ್ರ ಆರ್ಥಿಕ ಹಿನ್ನಡೆಗೆ ಕಾರಣವಾಗಿತ್ತು. ಸಂಸ್ಥೆಯು ಇಂಧನ ಕಂಪನಿಗಳಿಗೆ ಇಂಧನದ ವೆಚ್ಚವನ್ನು, ಭವಿಷ್ಯ ನಿಧಿ ಮತ್ತು ಸರಬರಾಜುದಾರರ/ ಇತರೆ ಬಿಲ್ಲುಗಳನ್ನು ಪಾವತಿಸದೇ ಬಾಕಿಯಿರಿಸಿದ್ದರಿಂದ ಸಂಸ್ಥೆಯ ಮೇಲೆ ಆರ್ಥಿಕ ಹೊರೆ ಹೆಚ್ಚಾಗಿತ್ತು.**<br>2023ರ ಮೇ ತಿಂಗಳ ನಂತರ ದಿನನಿತ್ಯ ಡೀಸೆಲ್ ತೈಲ ಬೆಲೆ ಹೆಚ್ಚಳದೊಂದಿಗೆ ಸಿಬ್ಬಂದಿಗಳ ವೇತನ ಹೆಚ್ಚಳ, ವಾಹನ ಬಿಡಿ ಭಾಗಗಳ ವೆಚ್ಚ ಒಳಗೊಂಡಂತೆ ಒಟ್ಟು ಕಾರ್ಯಾಚರಣೆ ವೆಚ್ಚ ಹೆಚ್ಚಾಗಿ ಸಂಸ್ಥೆಗೆ ಹೆಚ್ಚಿನ ಆರ್ಥಿಕ ಹೊರೆ ಉಂಟಾಗಿದೆ.<br><br>ಮೇಲ್ಕಂಡ ಅಂಶಗಳನ್ನು ಗಮನಿಸಿ, ಸಂಸ್ಥೆಯ ಬಾಕಿ ಹೊಣೆಗಾರಿಕೆಯನ್ನು ಕಡಿಮೆ ಮಾಡಲು ಹಾಗೂ ಸಂಸ್ಥೆಯನ್ನು ಆರ್ಥಿಕವಾಗಿ ಸದೃಡಗೊಳಿಸಲು ಸರ್ಕಾರದಿಂದ ಈ ಕೆಳಕಂಡಂತೆ ಸಹಾಯಹಸ್ತ ನೀಡಲಾಗಿದೆ.<br>• ಬೆಂಗಳೂರು ಮಹಾನಗರ ಸಾರಿಗೆ ಸಂಸ್ಥೆಯಲ್ಲಿ 2023-24 ರಿಂದ 2025-26ರವರೆಗೆ ಖರೀದಿಸಿರುವ/ ಖರೀದಿ ಹಂತದಲ್ಲಿರುವ ಹೊಸ ಬಸ್ಸುಗಳ ವಿವರ ಕೆಳಕಂಡಂತಿದೆ: |

| **ಸಂಸ್ಥೆ** | **2023-24 (Jan)** | **2024-25** | **2025-26** | **ಒಟ್ಟು** |
|---|---|---|---|---|
| ಬೆಂ.ಮ.ಸಾ.ಸಂಸ್ಥೆ | 20 ಡೀಸೆಲ್ | 820 ಡೀಸೆಲ್ | - | 2365 |
| | 341 ಇ.ವಿ | 755 ಇ.ವಿ | 429 ಇ.ವಿ | |

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| | | • ಕೇಂದ್ರ ಸರ್ಕಾರದ PM e-drive ಯೋಜನೆಯಡಿ ಬೆಂ.ಮ.ಸಾ.ಸಂಸ್ಥೆಗೆ 4500 ವಿದ್ಯುತ್ ಚಾಲಿತ ಬಸ್ಸುಗಳನ್ನು GCC ಮಾದರಿಯಲ್ಲಿ ಆಚರಣೆ ಮಾಡಲು ಮಂಜೂರಾತಿ ದೊರೆತಿದ್ದು, ಮುಂದಿನ ದಿನಗಳಲ್ಲಿ ಸೇರ್ಪಡೆಗೊಳಿಸಲು ಯೋಜಿಸಲಾಗಿರುತ್ತದೆ.<br><br>• 2026-27ನೇ ಸಾಲಿನ ಆಯವ್ಯಯ ಭಾಷಣದ ಕಂಡಿಕೆ 480 ರಲ್ಲಿ ನಾಲ್ಕು ಸಾರಿಗೆ ನಿಗಮಗಳಿಗೆ 1000 ಡೀಸೆಲ್ ಬಸ್‌ಗಳನ್ನು ಒದಗಿಸಲಾಗುವುದು ಎಂದು ಘೋಷಿಸಲಾಗಿರುತ್ತದೆ.<br><br>• ಸರ್ಕಾರವು ಪ್ರಯಾಣಿಕರಿಗೆ ಸಾರಿಗೆ ಮೂಲಭೂತ ಸೌಲಭ್ಯವನ್ನು ಕಲ್ಪಿಸಲು ಬೆಂ.ಮ.ಸಾ.ಸಂಸ್ಥೆಗೆ 2022-23 ನೇ ಸಾಲಿನಲ್ಲಿ ರೂ.60.00 ಕೋಟಿಗಳನ್ನು, 2023-24ನೇ ಸಾಲಿನಲ್ಲಿ ರೂ.36.36 ಕೋಟಿಗಳನ್ನು ಮತ್ತು 2024-25 ನೇ ಸಾಲಿನಲ್ಲಿ ರೂ.40.00 ಕೋಟಿಗಳ ಅನುದಾನವನ್ನು ಬಿಡುಗಡೆಗೊಳಿಸಿರುತ್ತದೆ ಹಾಗೂ 2023-24ನೇ ಸಾಲಿನಲ್ಲಿ ಸಂಸ್ಥೆಗೆ 320 AC EV ಬಸ್ಸುಗಳನ್ನು GCC ಮಾದರಿಯಲ್ಲಿ ಕಾರ್ಯಚರಿಸಲು ರೂ.150.00 ಕೋಟಿಗಳ ವಿಶೇಷ ಅನುದಾನವನ್ನು ನೀಡಿರುತ್ತದೆ.<br><br>• ಸರ್ಕಾರದ ಆದೇಶ ಸಂಖ್ಯೆ: ಟಿಡಿ 45 ಟಿಸಿಬಿ 2023, ದಿನಾಂಕ:31.12.2024 ರನ್ವಯ ಸಾರಿಗೆ ನಿಗಮಗಳ ಬಾಕಿ ಹೊಣೆಗಾರಿಕೆಗಳಾದ ಭವಿಷ್ಯ ನಿಧಿ ಹಾಗೂ ಇಂಧನದ ಬಾಕಿ ಮೊತ್ತ ಪಾವತಿಸಲು ಬೆಂ.ಮ.ಸಾ.ಸಂಸ್ಥೆಗೆ ರೂ.589.20 ಕೋಟಿಗಳ ಸಾಲವನ್ನು ಸರ್ಕಾರದ ಖಾತರಿ/ ಗ್ಯಾರಂಟಿಯೊಂದಿಗೆ ಹಣಕಾಸು ಸಂಸ್ಥೆಗಳಿಂದ ಪಡೆಯಲು ಅನುಮೋದನೆ ನೀಡಿ 2025-26ನೇ ಸಾಲಿನಲ್ಲಿ ಸದರಿ ಸಾಲದ ಅಸಲು ಮತ್ತು ಬಡ್ಡಿ ಮರುಪಾವತಿಗಾಗಿ ರೂ.131.00 ಕೋಟಿಗಳನ್ನು ಪ್ರಾವಧಾನ ಮಾಡಿದ್ದು, ಮಾರ್ಚ್- 2026ರ ಅಂತ್ಯದವರೆಗೆ ರೂ.111.59 ಕೋಟಿಗಳನ್ನು ಬಿಡುಗಡೆ ಮಾಡಿದೆ. |

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| | | • ಸಂಸ್ಥೆಯ ನಗದು ಕೊರತೆಯನ್ನು ನಿಭಾಯಿಸಲು 2023-24ನೇ ಹಾಗೂ 2024-25ನೇ ಸಾಲಿನಲ್ಲಿ ಬೆಂ.ಮ.ಸಾ.ಸಂಸ್ಥೆಯು ಸರ್ಕಾರಕ್ಕೆ ಪಾವತಿಸಬೇಕಾದ ಮೋಟಾರು ವಾಹನ ತೆರಿಗೆ ಪಾವತಿಯಿಂದ ವಿನಾಯಿತಿ ನೀಡಲಾಗಿದೆ.<br><br>• ಸಂಸ್ಥೆಯಲ್ಲಿ ದಿನಾಂಕ:01.01.2020 ರಿಂದ ದಿನಾಂಕ:28.02.2023 ರವರೆಗಿನ ಅವಧಿಯಲ್ಲಿ ಸೇವಾವಿಮುಕ್ತಿ ಹೊಂದಿದ ಅಧಿಕಾರಿ/ ನೌಕರರಿಗೆ ದಿನಾಂಕ:01.01.2020ರ ಪರಿಷ್ಕೃತ ವೇತನ ಶ್ರೇಣಿಯನ್ವಯ ಪಾವತಿಸಬೇಕಾದ ಉಪಧನ ಹಾಗೂ ಗಳಿಕೆ ರಜೆ ನಗದೀಕರಣದ ವ್ಯತ್ಯಾಸ ಮೊತ್ತದ ಪಾವತಿಗಾಗಿ ಒಟ್ಟು ರೂ.50.25 ಕೋಟಿಗಳ ಅನುದಾನ ಬಿಡುಗಡೆ ಮಾಡಲಾಗಿದ್ದು, ಅದರಂತೆ ನಿವೃತ್ತ ನೌಕರರಿಗೆ ಈಗಾಗಲೇ ಪಾವತಿ ಮಾಡಲಾಗಿರುತ್ತದೆ:-<br><br>• ನಾಲ್ಕು ನಿಗಮಗಳ ನೌಕರರಿಗೆ ದಿನಾಂಕ:01.01.2021ರಿಂದ 28.02.2023ರವರೆಗೆ ಒಟ್ಟು 26 ತಿಂಗಳ ಹಿಂಬಾಕಿ ಮೊತ್ತ ರೂ.1271.92 ಕೋಟಿಗಳನ್ನು ಪಾವತಿಸಲು ಹಾಗೂ ದಿನಾಂಕ:01.04.2025 ರಿಂದ ಜಾರಿಗೆ ಬರುವಂತೆ ಶೇಕಡಾವಾರು ಎಷ್ಟು ಪ್ರಮಾಣದಲ್ಲಿ ಪರಿಷ್ಕರಿಸಬೇಕೆಂಬ ಕುರಿತು ಕಾರ್ಮಿಕ ಸಂಘಟನೆಗಳ ಜೊತೆ ಚರ್ಚಿಸುವ ಪ್ರಕ್ರಿಯೆಯನ್ನು ಪ್ರಾರಂಭಿಸಲು ಸರ್ಕಾರದ ಆದೇಶ ಸಂಖ್ಯೆ:ಟಿಡಿ 12 ಟಿಸಿಬಿ 2023, ದಿನಾಂಕ:18.02.2026ರಲ್ಲಿ ಅನುಮೋದನೆ ನೀಡಿ ಆದೇಶಿಸಲಾಗಿರುತ್ತದೆ. |

ಸಂಖ್ಯೆ: ಟಿಡಿ 151 ಟಿಸಿಕ್ಯೂ 2026

(ರಾಮಲಿಂಗಾರೆಡ್ಡಿ)
ಸಾರಿಗೆ ಮತ್ತು ಮುಜರಾಯಿ ಸಚಿವರು

**ಅನುಬಂಧ-1**

**ವಿಧಾನ ಪರಿಷತ್ತಿನ ಸದಸ್ಯರಾದ ಶ್ರೀ ಹೆಚ್. ಎಸ್. ಗೋಪಿನಾಥ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ)**
**ಇವರ ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ ಎಲ್.ಸಿ.ಕ್ಯೂ : 1782 (2126)**

ಶಕ್ತಿ ಯೋಜನೆಯಡಿ ದಿನಾಂಕ:11.06.2023 ರಿಂದ 28.02.2026ರವರೆಗೆ, ನಾಲ್ಕು ಸಾರಿಗೆ ನಿಗಮಗಳ ಬಸ್ಸುಗಳಲ್ಲಿ ಸಂಚರಿಸಿದ ಫಲಾನುಭವಿಗಳ ಸಂಖ್ಯೆಯ ವಿವರಗಳು ಈ ಕೆಳಕಂಡಂತಿದೆ.

| ಸಂಸ್ಥೆ/ನಿಗಮ | ವರ್ಷ | ಫಲಾನುಭವಿಗಳ ಸಂಖ್ಯೆ (ಕೋಟಿಗಳಲ್ಲಿ) |
|---|---|---|
| ಕ.ರಾ.ರ.ಸಾ.ನಿಗಮ | 2023-2024 | 56.27 |
| | 2024-2025 | 75.98 |
| | 2025-2026 | 76.65 |
| ಬೆಂ.ಮ.ಸಾ.ಸಂಸ್ಥೆ | 2023-2024 | 57.84 |
| | 2024-2025 | 77.27 |
| | 2025-2026 | 82.51 |
| ವಾ.ಕ.ರ.ಸಾ.ಸಂಸ್ಥೆ | 2023-2024 | 42.14 |
| | 2024-2025 | 56.69 |
| | 2025-2026 | 59.61 |
| ಕ.ಕ.ರ.ಸಾ.ನಿಗಮ | 2023-2024 | 26.81 |
| | 2024-2025 | 34.71 |
| | 2025-2026 | 34.39 |
| ಒಟ್ಟಾರೆ ನಾಲ್ಕು ನಿಗಮ / ಸಂಸ್ಥೆ | 2023-2024 | 183.07 |
| | 2024-2025 | 244.65 |
| | 2025-2026 | 253.16 |
| **ಒಟ್ಟಾರೆ** | | **680.87** |